**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 41/2020**

**ಚಾ.ಸಾ. :- 14**
**ಪ್ರಾ.ಸಾ. :- 05**

| | | |
|---|---|---|
| ಹೆಸರು | : | ಚೌಡೇಗೌಡ |
| ತಂದೆಯ ಹೆಸರು | : | ಲೇಟ್ ಚನ್ನೇಗೌಡ |
| ವಯಸ್ಸು | : | 66 ವರ್ಷ |
| ಉದ್ಯೋಗ | : | ನಿವೃತ್ತ ಎ.ಎಸ್.ಐ., |
| ವಾಸಸ್ಥಳ | : | ಶ್ರೀರಂಗಪಟ್ಟಣ. |

**ಪ್ರಮಾಣೀಕರಿಸಲಾದ ದಿನಾಂಕಃ- 09.02.2026.**

**<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>**

ನಾನು 2018 ರಿಂದ 2019 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 17.06.2019 ರಂದು ನಾನು ಚಾ.ಸಾ-13 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ಈಗಾಗಲೇ ನಿಪಿ-2 ಎಂದು ಗುರುತಿಸಲಾಯಿತು. ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಫೋಟೋಗಳನ್ನು ಪಂಚನಾಮೆಯ ಸಮಯದಲ್ಲಿ ತೆಗೆಯಿಸಿರುತ್ತೇನೆ. ಮೃತರ ಮರಣೋತ್ತರ ಪರೀಕ್ಷೆಯನ್ನು ಮಾಡುವಂತೆ ಮನವಿ ಸಲ್ಲಿಸಿರುತ್ತೇನೆ.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತೇನೆ ಹಾಗೂ ಅಪಘಾತ ಸ್ಥಳದ ಫೋಟೋಗಳನ್ನು ತೆಗೆಯಿಸಿರುತ್ತೇನೆ. ಪಂಚರ ಸಮಕ್ಷಮ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ವಾಹನಗಳ 4 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಪಿ-5 ಮತ್ತು 6 ಎಂದು ಗುರುತಿಸಲಾಗಿದೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-15 ರವರು ಪಡೆದುಕೊಂಡಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಸ್ಥಳ ಪಂಚನಾಮೆಗೆ ಸಾಕ್ಷಿಯಾಗುವಂತೆ ಪಂಚರಿಗೆ ನೋಟೀಸ್ ಕೊಟ್ಟಿಲ್ಲ. ನಾನು ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಹಾಗೂ ಪ್ರಕರಣಕ್ಕೆ ಅನುಕೂಲವಾಗುವಂತೆ ಸ್ಥಳ ಮಹಜರ್, ಕಚ್ಚಾ ನಕಾಶೆ ತಯಾರು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.

ತನಿಖಾ ಸಮಯದಲ್ಲಿ ಚಾ.ಸಾ-15 ನನ್ನ ಜೊತೆ ಇದ್ದರೋ, ಇಲ್ಲವೋ ನೆನಪಿಲ್ಲ. ಸ್ಥಳ ಮಹಜರ್ ನನ್ನ ಹಸ್ತಾಕ್ಷರದಲ್ಲಿಲ್ಲ. ಮಹಜರ್ ನಲ್ಲಿ ನಮೂದಾಗಿರುವ ಗುರುಭವನಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಕಚ್ಚಾ ನಕಾಶೆ ಬರೆದಿಲ್ಲ. ಸ್ಥಳಕ್ಕೆ ಹೋದಾಗ 2 ವಾಹನಗಳನ್ನು ರಸ್ತೆಯಿಂದ ಪಕ್ಕಕ್ಕೆ ಸರಿಸಿ ನಿಲ್ಲಿಸಿದ್ದರು. ಯಾರು ಆ ರೀತಿ ವಾಹನಗಳನ್ನು ಪಕ್ಕಕ್ಕೆ ಸರಿಸಿದ್ದರು ಎಂದು ನಾನು ತನಿಖೆ ಮಾಡಿಲ್ಲ.

ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಮೃತರಿಗೆ ದ್ವಿಚಕ್ರ ವಾಹನ ಚಾಲನೆ ಮಾಡಲು ಪರವಾನಗಿ ಇರಲಿಲ್ಲ ಎಂದರೆ ಸರಿ. ಸದರಿಯವರಿಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ, ಹಾಗಾಗಿ ಅವರ ಅಜಾಗರೂಕತೆ ಹಾಗೂ ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**